ಎಂ.ವಿ.ಸಿ. 95/2025, ಆರ್.ಡಬ್ಲ್ಯೂ-1 ಹೆಸರುಃ ಮನೋಜ್ ಕುಮಾರ್

**ದಿಃ11-02-2026 ರಂದು ಸಾಕ್ಷಿದಾರರು ಹಾಜರಿದ್ದು, ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆಃ 2 ನೇ ಎದುರುದಾರರ ಪರ ಶ್ರೀ ಪಿ.ಎನ್. ವಕೀಲರಿಂದಃ**

ನಾನು ನನ್ನ ಪ್ರಮಾಣ ಪತ್ರಿಕೆಯನ್ನು ಸಲ್ಲಿಸಿರುತ್ತೇನೆ. ಇದರಲ್ಲಿರುವ ಎಲ್ಲಾ ಸಂಗತಿಗಳು ಸತ್ಯವಾಗಿರುತ್ತದೆ. ಪ್ರಮಾಣ ಪತ್ರದಲ್ಲಿ ಇರುವ ಸಹಿಗಳು ನನ್ನದೇ ಆಗಿರುತ್ತದೆ.

ಕೆ.ಎ.16/ಎನ್.0053 ರ ಮಾರುತಿ ಸುಜುಕಿ ಓಮಿನಿ ಕಾರಿಗೆ ಸಂಬಂಧಿಸಿದ ವಿಮಾ ಪಾಲಿಸಿಯನ್ನು ಹಾಜರುಪಡಿಸಿದ್ದು ಅದನ್ನು ನಿಆರ್.1 ಎಂದು ಗುರುತಿಸಲಾಯಿತು.

**ಪಾಟೀ ಸವಾಲು : ಅರ್ಜಿದಾರರ ಪರ ಶ್ರೀ ಪಿ.ಆರ್.ಎಲ್. ವಕೀಲರಿಂದ**

2. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಾನು ಪೊಲೀಸ್ ಅಧಿಕಾರಿಗಳು ಸಲ್ಲಿಸಿರುವ ಸಂಪೂರ್ಣ ದಾಖಲಾತಿಗಳನ್ನು ಪರಿಶೀಲನೆ ಮಾಡಿರುತ್ತೇನೆ. ನಮ್ಮ ವಿಮಾ ಕಂಪನಿಯಿಂದ ಆಂತರಿಕ ತನಿಖೆಯನ್ನು ಮಾಡಿಸಿದ್ದೆವು. ನಮ್ಮ ವಿಮಾ ಕಂಪನಿಯವರು ನಡೆಸುವ ಆಂತರಿಕ ತನಿಖೆಯ ಕಾಲಕ್ಕೆ ಚಾಸಾ.11 ರವರ ಹೇಳಿಕೆಯನ್ನು ಪಡೆದುಕೊಂಡಿಲ್ಲ. ಅಪಘಾತದ ಸಮಯದಲ್ಲಿ ಕೆ.ಎ.16-ಎನ್.-0053 ರ ಓಮಿನಿ ಕಾರಿಗೆ ವಿಮಾ ಪಾಲಿಸಿ ಚಾಲ್ತಿಯಲ್ಲಿತ್ತು ಎಂದರೆ ಸರಿ. ಸದರಿ ಸಮಯದಲ್ಲಿ ಓಮಿನಿ ವಾಹನದ ಚಾಲಕನಿಗೆ ಮಾನ್ಯತೆ ಹೊಂದಿದಂತಹ ಚಾಲನಾ ಪರವಾನಗಿ ಇತ್ತು ಎಂದರೆ ಸರಿ. ಪರಿಹಾರವನ್ನು ಪಾವತಿಸುವ ಬಾಧ್ಯತೆಯಿಂದ ತಪ್ಪಿಸಿಕೊಳ್ಳುವ ಸಲುವಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತಕ್ಕೆ ಕೆ.ಎ.-16-ಇ.ಎಲ್.-7026 ರ ಮೃತ ಚಾಲಕನು ಕಾರಣ ಅಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿನ ಎಲ್ಲಾ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರುವಿಚಾರಣೆ :ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ